**ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ**

**ನ್ಯಾಯಾಲಯ, ಹೊಳೆನರಸೀಪುರ**

ಪ್ರಾಸ –10

**CC No**: 41/2020 ಚಾಸ- 15

| | |
|---|---|
| ಹೆಸರು | **ರಾಜಪ್ಪ** |
| ತಂದೆ/ಗಂಡನ ಹೆಸರು | **ಲೇಟ್ ಅಪ್ಪಾಜಿಶೆಟ್ಟಿ** |
| ವಯಸ್ಸು | **65 ವರ್ಷ** |
| ಉದ್ಯೋಗ | **ನಿವೃತ್ತ ಪಿ ಎಸ್ ಐ** |
| ವಾಸಸ್ಥಳ | **ಇಲಿವಾಲ, ಮೈಸೂರು** |

ದಿನಾಂಕಃ 18.03.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಸ.ಸ.ಅ ರವರಿಂದಃ–**

ನಾನು ದಿಃ 25.07.2019 ರಿಂದ 30.06.2021 ರವರಗೆ ಹಳ್ಳಿಮೈಸೂರು ಪೊಲಿಸ್ ಠಾಣೆಯಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 01.01.2020 ರಂದು ಪ್ರಕರಣದ ಕಡತವನ್ನು ಚಾಸಾ 14 ರಿಂದ ಪಡೆದುಕೊಂಡು ಪರಿಶೀಲನೆ ಮಾಡಿ ತನಿಖೆಯನ್ನು ಮುಂದುವರೆಸಿ ದಿನಾಂಕಃ 12.01.2020 ರಂದು ಶಾಂತಿಗ್ರಾಮ ಪೊಲೀಸ್ ಠಾಣಾ ಮೊಕದ್ದಮೆ ನಂ.142/2019 ರ ಆರೋಪಿತರಾದ ಶಕೀರ್, ಇಲಿಯಾಜ್ ಪಾಷ ಮತ್ತು ಇಬ್ರಾಹಿಂ ರವರನ್ನು ಘನ ನ್ಯಾಯಾಲಯಕ್ಕೆ ಹಾಜರುಪಡಿಸಲು ಮಾನ್ಯ ನ್ಯಾಯಾಲಯದಿಂದ ಬಾಡಿ ವಾರೆಂಟ್ ಪಡೆಯಲು ಅರ್ಜಿ ಸಲ್ಲಿಸಿ ನ್ಯಾಯಾಲಯದಿಂದ ಬಾಡಿ ವಾರೆಂಟ್ ಪಡೆದು

ದಿನಾಂಕಃ 03.02.2020 ರಂದು ಹಾಜರುಪಡಿಸಿರುತ್ತೇನೆ. ಇನ್ನೊಬ್ಬ ಸಮೀರ್ ಎನ್ನುವ ಆರೋಪಿ ತಲೆಮರೆಸಿಕೊಂಡಿರುತ್ತಾನೆ. ದಿಃ 14.03.2020 ರಂದು ಚಾಸಾ 10 ರವರು ಠಾಣೆಗೆ ತಂದು ಹಾಜರುಪಡಿಸಿದ ಕಡತಗಳನ್ನು ಸ್ವೀಕರಿಸಿ, ಈ ಕುರಿತು ಸದರಿಯವರಿಗೆ ಸ್ವೀಕೃತಿಯನ್ನು ಕೊಟ್ಟಿರುತ್ತೇನೆ. ಆರೋಪ ಸಾಬೀತಾಗಿದ್ದರಿಂದ ತನಿಖೆಯನ್ನು ಪೂರ್ಣಗೊಳಿಸಿ ಮಾನ್ಯ ನ್ಯಾಯಾಲಯಕ್ಕೆ ಆರೋಪಿತರ ವಿರುದ್ಧ ದೋಷರೋಪಣೆ ಪಟ್ಟಿ ಸಲ್ಲಿಸಿರುತ್ತೇನೆ.

ಸಾಕ್ಷಿ ಸ್ವೀಕೃತಿಯನ್ನು ನೋಡಿ ಗುರುತಿಸಿದ್ದರಿಂದ, ಅದನ್ನು ನಿಪಿ 8 ಎಂದು ಗುರುತಿಸಲಾಯಿತು. ಸಾಕ್ಷಿ ವಿ.ಸಿ.ಯಲ್ಲಿ ಕಾಣುತ್ತಿರುವ 4ನೇ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ. ಉಳಿದ ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ.

**ಪಾಟೀಸವಾಲು ಆರೋಪಿ ಪರ ವಕೀಲರಿಂದ :-**

ದಿಃ 01.01.2020 ರಂದು ಪ್ರಕರಣದ ಕಡತವನ್ನು ಚಾಸಾ 14 ರಿಂದ ಪಡೆದುಕೊಂಡು ಪರಿಶೀಲನೆ ಮಾಡಿ ತನಿಖೆಯನ್ನು ಮುಂದುವರೆಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಿನಾಂಕಃ 12.01.2020 ರಂದು ಶಾಂತಿಗ್ರಾಮ ಪೊಲೀಸ್ ಠಾಣಾ ಮೊಕದ್ದಮೆ ನಂ.142/2019 ರ ಆರೋಪಿತರಾದ ಶಕೀರ್, ಇಲಿಯಾಜ್ ಪಾಷ ಮತ್ತು ಇಬ್ರಾಹಿಂ ರವರನ್ನು ಘನ ನ್ಯಾಯಾಲಯಕ್ಕೆ ಹಾಜರುಪಡಿಸಲು ಮಾನ್ಯ ನ್ಯಾಯಾಲಯದಿಂದ ಬಾಡಿ ವಾರೆಂಟ್ ಪಡೆಯಲು ಅರ್ಜಿ ಸಲ್ಲಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನ್ಯಾಯಾಲಯದಿಂದ ಬಾಡಿ ವಾರೆಂಟ್ ಪಡೆದು ದಿನಾಂಕಃ 03.02.2020 ರಂದು ಹಾಜರುಪಡಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಿಃ 14.03.2020 ರಂದು

ಚಾಸಾ 10 ರವರು ಠಾಣೆಗೆ ತಂದು ಹಾಜರುಪಡಿಸಿದ ಕಡತಗಳನ್ನು ಸ್ವೀಕರಿಸಿ, ಈ ಕುರಿತು ಸದರಿಯವರಿಗೆ ಸ್ವೀಕೃತಿಯನ್ನು ಕೊಟ್ಟಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಯಾವುದೇ ಸಾಕ್ಷಿ ಆಧಾರಗಳು ಇಲ್ಲದೇ ಇದ್ದರೂ ಸಹಾ ಆರೋಪಿತರ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ**

ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ. ಹೇ. ಕೇ. ಸ. ಇದೆ.

(ಶ್ರೀಮತಿ. ನಿವೇದಿತಾ ಮಹಾಂತೇಶ್ ಮುನವಳ್ಳಿಮಠ್)
ಹಿ.ವ್ಯ.ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ರವರು ಹೊಳೆನರಸೀಪುರ.